# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ಶ್ರೀ ಹೆಚ್.ಎಸ್. ಚಂದ್ರಶೇಖರ್, ಕಾರ್ಯನಿರ್ವಾಹಕ ಅಧಿಕಾರಿ, ತಾಪಂ, ಆಲೂರು ಹಾಸನ ಜಿಲ್ಲೆ ಇವರ ವಿರುದ್ಧ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:-ಮಾನ್ಯ ಉಪ ಲೋಕಾಯುಕ್ತರು,ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿ ಸಲ್ಲಿಸಿರುವ ವರದಿ ಸಂಖ್ಯೆ: ಕಂಪ್ಲೆಂಟ್/ ಉಪಲೋಕ್/ ಎಂವೈಎಸ್-7301/2014/ಡಿಆರ್ಇ-01,ದಿ:27-02-2017

-000-

ಪ್ರಸ್ತಾವನೆ:

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ದಿನಾಂಕ 25-03-2017ರ ಅ.ಸ. ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತರು-2 ಕರ್ನಾಟಕ ರಾಜ್ಯ ಬೆಂಗಳೂರು ಇವರು ತಮ್ಮ ದಿನಾಂಕ 27-02-2017ರ ಪತ್ರದಲ್ಲಿ ಶ್ರೀ ಹೆಚ್.ಎಸ್. ಚಂದ್ರಶೇಖರ್, ಕಾರ್ಯನಿರ್ವಾಹಕ ಅಧಿಕಾರಿ ಇವರ ವಿರುದ್ಧದ ವರದಿಯು ಕರ್ನಾಟಕ ಲೋಕಾಯುಕ್ತ ಕಾಯಿದೆ, 1984ರ ಕಲಂ 12(3)ರನ್ವಯ ಸಲ್ಲಿಸಿರುತ್ತಾರೆ.

ಶ್ರೀ ಎಂ.ಎಲ್. ಮೋಹನಕುಮಾರ್, ಮಾದನಹಳ್ಳಿ ಗ್ರಾಮ, ಮಡಬಲು ಅಂಚೆ, ಪಾಳ್ಯ ಹೋಬಳಿ, ಆಲೂರು ತಾಲ್ಲೂಕು, ಹಾಸನ ಜಿಲ್ಲೆ, ಇವರ ದೂರಿನಲ್ಲಿ ಶ್ರೀ ಹೆಚ್.ಎಸ್. ಚಂದ್ರಶೇಖರ್, ಕಾರ್ಯನಿರ್ವಾಹಕ ಅಧಿಕಾರಿ ಇವರ ವಿರುದ್ಧ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿರುತ್ತಾರೆ.

ದೂರುದಾರರು ತಮ್ಮ ದೂರಿನಲ್ಲಿ ಆಲೂರು ತಾಲ್ಲೂಕು, ಮಡಬಲು ಗ್ರಾಪಂ.ಯ ಬಿಲ್ ಕಲೆಕ್ಟರ್ ಶ್ರೀಮತಿ ಲಕ್ಷ್ಮೀಯವರನ್ನು ಹಣ ದುರುಪಯೋಗದ ಬಗ್ಗೆ ದಿನಾಂಕ 03-09-2012ರಲ್ಲಿ ವಜಾ ಮಾಡಿರುತ್ತಾರೆ. ಆದರೆ ಶ್ರೀಮತಿ ಲಕ್ಷ್ಮೀಯವರಿಂದ ರೂ.1.00 ಲಕ್ಷ ಹಣವನ್ನು ಪಡೆದು ವಜಾ ಮಾಡಿರುವ ಆದೇಶವನ್ನು ರದ್ದುಪಡಿಸಬೇಕೆಂದು ದಿ:22.09.2014 ರಂದು ಮಡಬಲು ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ತಿಳಿಸಿರುತ್ತಾರೆ. ನಂತರ ಕಾರ್ಯನಿರ್ವಾಹಕ ಅಧಿಕಾರಿಗಳು ದಿ:29.09.2014 ರಂದು ಆದೇಶವನ್ನು ಹೊರಡಿಸಿ ಶ್ರೀಮತಿ ಲಕ್ಷ್ಮೀಯವರು ಕರ್ತವ್ಯಲೋಪ ಮತ್ತು ಭ್ರಷ್ಟಾಚಾರ ಎಸಗಿದ್ದರೂ ಕೂಡ ಸದರಿಯವರನ್ನು ಮತ್ತೆ ಕರ್ತವ್ಯಕ್ಕೆ ತೆಗೆದುಕೊಂಡಿರುತ್ತಾರೆ ಎಂದು ಆಪಾದಿಸಿ ದೂರನ್ನು ಸಲ್ಲಿಸಿರುತ್ತಾರೆ.

ತನಿಖಾಧಿಕಾರಿಯ ವರದಿಯ ಮೇಲೆ ಎದುರುದಾರರು ಆಕ್ಷೇಪಣೆಯಲ್ಲಿ ಹೇಳಿರುವಂತೆ ದಿ:29.09.2014 ರಂದು ಮತ್ತೊಂದು ಆದೇಶ ನೀಡಿದ್ದಾರೆನ್ನುವುದು ಸರಿಯಲ್ಲ. ದಿ:29.09.2014ರಲ್ಲಿ ಶ್ರೀಮತಿ ಲಕ್ಷ್ಮೀಯವರು ಹಣ ದುರುಪಯೋಗ ಪಡಿಸಿಕೊಂಡಿರುವುದು ದೃಢಪಡುತ್ತದೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಹಾಸನ ಇವರಿಗೆ ಶಿಸ್ತು ಕ್ರಮ ಕೈಗೊಳ್ಳಬಹುದು ಎಂದು ಬರೆಯಲಾಗಿರುತ್ತದೆ. ಹೀಗಾಗಿ ಬೇರೆ ಬೇರೆ ರೀತಿಯಲ್ಲಿ ಆದೇಶ ನೀಡಿದ್ದಾರೆಂಬುದು ಸರಿಯಲ್ಲ. ಆದೇಶಕ್ಕೂ ವರದಿಗೂ ವ್ಯತ್ಯಾಸ ತಿಳಿಯದೆ ದೂರುದಾರರು ನಮೂದಿಸಿರುತ್ತಾರೆ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಇವರ ಪತ್ರ ದಿನಾಂಕ 12.01.2015ರಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಸೆಕ್ಷನ್ 113(3)ನ್ನು ತಪ್ಪಾಗಿ ಅರ್ಥೈಸಿಕೊಂಡಿರುತ್ತಾರೆ ಎಂದು ತಿಳಿಸಿರುವ ಬಗ್ಗೆ ದಿ:03.11.2014ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ ಇವರಿಗೆ ಬರೆದಿರುವ ಪತ್ರದ ಮುಖಪುಟದ ಕೊನೆಯಲ್ಲಿ ದಿ:22.08.2014ರ ಆದೇಶದಲ್ಲಿ ಗೊಂದಲ ಸೃಷ್ಟಿಯಾಗಿರುವುದರಿಂದ ಆದೇಶವನ್ನು ಹಿಂಪಡೆಯಲಾಗಿದೆಯೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಹಾಸನ ರವರ ಗಮನಕ್ಕೆ ತರಲಾಗಿದೆ ಹಾಗೂ ಗೊಂದಲದಿಂದ ಆಗಿರುವುದರಿಂದ ಕ್ರಮ ಕೈಗೊಳ್ಳಬಾರದೆಂದು ಕೋರಿಕೊಂಡಿರುತ್ತಾರೆಂದು ವರದಿಸಿರುತ್ತಾರೆ.

..2

ಎದುರುದಾರರ ಆಕ್ಷೇಪಣೆಯ ಮೇಲೆ ದೂರುದಾರರು ಪ್ರತ್ಯುತ್ತರವನ್ನು ಸಲ್ಲಿಸಿದ್ದು, ಪ್ರತ್ಯುತ್ತರದಲ್ಲಿ ಈ ಪ್ರಕರಣಕ್ಕೆ ಸಂಬಂದಿಸಿದಂತೆ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಯವರ ಪ್ರಾಥಮಿಕ ಹಂತದ ಪ್ರಕ್ರಿಯೆಗಳಿಂದ ಅಂತಿಮ ಹಂತದ ಪ್ರಕ್ರಿಯೆಗಳವರೆಗಿನ ದಾಖಲಾತಿಗಳನ್ನು ಪರಿಶೀಲಿಸಿದಾಗ, ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮೇಲ್ಕಂಡವಿ ಪ್ರಕರಣಗಳಲ್ಲಿ ವಜಾಗೊಂಡ ನಂತರದ ಬಗ್ಗೆ ಯಾವುದೇ ಪ್ರಕ್ರಿಯೆಯನ್ನು ಕೈಗೊಳ್ಳುವ ಅಧಿಕಾರ ಇಲ್ಲದಿದ್ದಾಗ್ಯೂ, ಪ್ರಸ್ತುತ ಪ್ರಕರಣದಲ್ಲಿ ಇಲಾಖೆಯ ಎಲ್ಲಾ ಕ್ರಮಗಳನ್ನು ಗಾಳಿಗೆ ತೂರಿ ಅಸಂಬದ್ಧ ಪ್ರಕ್ರಿಯೆಗಳನ್ನು, ಆದೇಶಗಳನ್ನು ಸೂಚನೆಗಳನ್ನು ನೀಡಿ ಪ್ರಕರಣವನ್ನು ಗೊಂದಲಮಯವಾಗಿಸಿರುವುದು ಕಂಡು ಬರುತ್ತದೆ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕೋರಿರುತ್ತಾರೆ.

ದೂರುದಾರರು ಪ್ರತ್ಯುತ್ತರದ ಜೊತೆ ಹಾಜರುಪಡಿಸಿರುವ ದಾಖಲಾತಿಗಳನ್ನು ಪರಿಶೀಲಿಸಿದಾಗ, ದಿ:26/8/14ರಂದು ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ, ಇವರು ಶ್ರೀಮತಿ ಲಕ್ಷ್ಮೀ, ಬಿಲ್ ಕಲೆಕ್ಟರ್ ಇವರನ್ನು ಸೇವೆಯಿಂದ ವಜಾಮಾಡಿರುವ ಆದೇಶವನ್ನು ರದ್ದುಗೊಳಿಸಲು ಆದೇಶಿಸಿರುವುದು ಕಂಡುಬರುತ್ತದೆ. ಅದೇ ರೀತಿ ದಿ:29/9/2014 ರಂದು ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ, ಆಲೂರು ಇವರು ಶ್ರೀಮತಿ ಲಕ್ಷ್ಮೀ ಮತ್ತು ಶ್ರೀ ರೆಹಮಾನ್ ಷರೀಫ್, ಪಿ.ಡಿ.ಓ. ಇವರುಗಳು ಕರ್ತವ್ಯಲೋಪ ಎಸಗಿ ಹಣ ದುರುಪಯೋಗಕ್ಕೆ ಕಾರಣರಾಗಿರುತ್ತಾರೆಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಪಂ ಇವರಿಗೆ ಹೇಳಿರುವುದು ಕಂಡುಬರುತ್ತದೆ. ನಂತರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯವರು ಕಾರಣ ಕೇಳುವ ನೋಟೀಸಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಪಂ, ಇವರು ದಿ:3/11/2014ರಂದು ಉತ್ತರವನ್ನು ನೀಡಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿ.ಪಂ, ಹಾಸನ ಇವರ ವರದಿಯನ್ನು ಪರಿಶೀಲಿಸಿದಾಗ, ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ, ಆಲೂರು ಇವರು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ.113(3)ರಂತೆ ವಜಾ ಆದ ನೌಕರರ ಸಂಬಂಧ ಕಲಂ.113(4)ನ್ನು ತಪ್ಪಾಗಿ ಅರ್ಥೈಸಿಕೊಂಡು ಅಧಿಕಾರ ಚಲಾಯಿತಿ ಆದೇಶ ಮಾಡಿರುವುದು ಕಂಡುಬರುತ್ತದೆ. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ.113(4)ರ ಪ್ರಕಾರ 2ನೇ ಉಪ ಪ್ರಕರಣದ ಅಡಿಯಲ್ಲಿ ಕಾರ್ಯದರ್ಶಿ ಮಾಡಿದ ಆದೇಶದ ವಿರುದ್ಧ ಕಾರ್ಯನಿರ್ವಾಹಕ ಅಧಿಕಾರಿಗೆ ಮತ್ತು 3ನೇ ಉಪಪ್ರಕರಣದ ಅಡಿಯಲ್ಲಿ ಗ್ರಾಪಂ ಮಾಡಿದ ಆದೇಶದ ವಿರುದ್ಧ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಅಪೀಲು ಮಾಡಿಕೊಳ್ಳುವ ಅವಕಾಶ ಇರತಕ್ಕದ್ದು ಎಂದು ಇರುವುದು ಕಂಡುಬಂದಿದ್ದು, ಇದನ್ನು ಗಮನಿಸಿದಾಗ, ಎದುರುದಾರರು ತನ್ನ ಕರ್ತವ್ಯ ವ್ಯಾಪ್ತಿ ಮೀರಿ ಆದೇಶ ಮಾಡಿರುವುದು, ಎದುರುದಾರರ ಕರ್ತವ್ಯ ಲೋಪವನ್ನು ತೋರಿಸುತ್ತದೆ. ಆ ಕಾರಣದಿಂದ ಎದುರುದಾರರು ಶಿಸ್ತುಕ್ರಮಕ್ಕೆ ಬಾಧ್ಯರಾಗಿರುತ್ತಾರೆ.

ಆದ್ದರಿಂದ ಎದುರುದಾರರ ಆಕ್ಷೇಪಣೆಯು ಅವರ ಮೇಲಿನ ಆಪಾದನೆಯನ್ನು ಅಲ್ಲಗಳೆಯಲು ಸೂಕ್ತ ಅಥವಾ ಸಮಾಧಾನಕರವಾಗಿರುವುದಿಲ್ಲ ಮತ್ತು ದೂರುದಾರರ ದೂರನ್ನು ಅಲ್ಲಗಳೆಯಲು ಯಾವುದೇ ಸಮಂಜಸ/ಸಮರ್ಪಕ ಉತ್ತರವನ್ನು ತಮ್ಮ ಆಕ್ಷೇಪಣೆಯಲ್ಲಿ ನೀಡಿಲ್ಲವೆಂಬ ಅಭಿಪ್ರಾಯಕ್ಕೆ ಬಂದಿರುವುದಾಗಿ ಉಪಲೋಕಾಯುಕ್ತರು ವರದಿಸಿರುತ್ತಾರೆ.

ಆದ್ದರಿಂದ, ಎದುರುದಾರರಾದ ಶ್ರೀ ಹೆಚ್.ಎಸ್.ಚಂದ್ರಶೇಖರ್, ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ, ಆಲೂರು ಇವರು ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ನಿಷ್ಠೆಯನ್ನು ತೋರದೆ, ಪಂಚಾಯತ್ ರಾಜ್ ಅಧಿನಿಯಮ ಕಲಂ 113(3)ರಂತೆ ವಜಾ ಆದ ನೌಕರರ ಸಂಬಂಧ ಕಲಂ 113(4)ನ್ನು ತಪ್ಪಾಗಿ ಅರ್ಥೈಸಿಕೊಂಡು ಅಧಿಕಾರ ಚಲಾಯಿಸಿ ಆದೇಶ ಮಾಡಿರುವುದು ಕಂಡುಬರುತ್ತದೆ. ಪಂಚಾಯತ್ ರಾಜ್ ಅಧಿನಿಯಮ ಕಲಂ 113(4)ರ ಪ್ರಕಾರ 2ನೇ ಉಪ ಪ್ರಕರಣದ ಅಡಿಯಲ್ಲಿ ಕಾರ್ಯದರ್ಶಿ ಮಾಡಿದ ಆದೇಶದ ವಿರುದ್ಧ ಕಾರ್ಯನಿರ್ವಾಹಕ ಅಧಿಕಾರಿಗೆ ಮತ್ತು 3ನೇ ಉಪಪ್ರಕರಣದ ಅಡಿಯಲ್ಲಿ ಗ್ರಾಪಂ ಮಾಡಿದ ಆದೇಶದ ವಿರುದ್ಧ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ಅಪೀಲು ಮಾಡಿಕೊಳ್ಳುವ ಅವಕಾಶ ಇರತಕ್ಕದ್ದು ಎಂದು ಇರುವುದು ಕಂಡುಬಂದಿದ್ದು, ಇದನ್ನು ಗಮನಿಸಿದಾಗ,

..3

ಎದುರುದಾರರು ತನ್ನ ಕರ್ತವ್ಯ ವ್ಯಾಪ್ತಿ ಮೀರಿ ಆದೇಶ ಮಾಡಿರುವುದು, ಎದುರುದಾರರ ಕರ್ತವ್ಯ ಲೋಪವನ್ನು ತೋರಿಸುತ್ತದೆ. ಕರ್ತವ್ಯಲೋಪವೆಸಗಿ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುತ್ತಾರೆಂದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮ 1966ರ ನಿಯಮ 3(i) (ii) ಮತ್ತು (iii) ರನ್ವಯ ಶಿಸ್ತು ಕ್ರಮಕ್ಕೆ ಬಾದ್ಯರಾಗಿರುತ್ತಾರೆಂದು, ಅವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14(ಎ)ರನ್ವಯ ವಿಚಾರಣೆ ನಡೆಸಲು ಉಪ ಲೋಕಾಯುಕ್ತರಿಗೆ ವಹಿಸಬೇಕೆಂದು ಕೋರಿರುತ್ತಾರೆ.

ಮೇಲೆ ವಿವರಿಸಿರುವಂತೆ ಶ್ರೀ ಎಂ.ಎಲ್.ಮೋಹನಕುಮಾರ, ಮಾದನಹಳ್ಳಿ ಗ್ರಾಮ, ಇವರು ನೀಡಿರುವ ದೂರಿನನ್ವಯ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಎದುರುದಾರರಾದ ಶ್ರೀ ಹೆಚ್.ಎಸ್. ಚಂದ್ರಶೇಖರ್, ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ, ಆಲೂರು ಇವರ ವಿರುದ್ಧದ ಇಲಾಖಾ ವಿಚಾರಣೆ ಹಾಗೂ ಶಿಸ್ತು ಕ್ರಮವನ್ನು ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಉಪ ನಿಯಮ 14(ಎ)ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲು ಮಾನ್ಯ ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 107 ವಿಸೇಬಿ 2017 ದಿನಾಂಕ:11-07-2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಶ್ರೀ ಹೆಚ್.ಎನ್ ಚಂದ್ರಶೇಖರ ಕಾರ್ಯನಿರ್ವಾಹಕ ಅಧಿಕಾರಿ ತಾಲೂಕ ಪಂಚಾಯತ ಆಲೂರು ಇವರ ವಿರುದ್ಧ ಆರೋಪಗಳ ಸಂಬಂಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಗಳು 1957 ನಿಯಮ 11 ಮತ್ತು 11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಗಳ ನಿಯಮ14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-2, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್ ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ-ಬಿ&ಸಿ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

<u>ಇವರಿಗೆ,</u>

1) ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಹಾಸನ.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು-01

<u>ಪ್ರತಿ ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.